ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1176
2.	ಮಾನ್ಯ ಸದಸ್ಯರ ಹೆಸರು	ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3.	ಉತ್ತರಿಸಬೇಕಾದ ದಿನಾಂಕ	15/03/2021
4.	ಉತ್ತರಿಸುವವರು	ಮಾನ್ಯ ಕಾರ್ಮಿಕ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯಲ್ಲಿ ಕೋವಿಡ್-19ರ ಸಂದರ್ಭದಲ್ಲಿ ಸರ್ಕಾರವು ಕಟ್ಟಡ ಕಾರ್ಮಿಕರಿಗೆ ರೂ.5000/- ಪರಿಹಾರ ಧನವನ್ನು ಘೋಷಿಸಿದ್ದು, ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರದ ಬಾಧಿತರೆಲ್ಲರಿಗೂ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದುವರೆವಿಗೂ ಎಷ್ಟು ಜನರಿಗೆ ಪರಿಹಾರಧನ ವಿತರಿಸಲಾಗಿದೆ; (ಮಾಹಿತಿ ಒದಗಿಸುವುದು)	ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಲಾಕ್‌ಡೌನ್ ಸಮಯಕ್ಕೆ ಅಂದರೆ ದಿನಾಂಕ: 23-3-2020 ರವರೆಗೆ ಮಂಡಳಿಯಲ್ಲಿ ನೋಂದಣಿಯಾಗಿದ್ದ ಕಾರ್ಮಿಕರಿಗೆ ಸಹಾಯಧನ ನೀಡಲು ಅವಶ್ಯಕ ದಾಖಲೆಗಳನ್ನು ದಿನಾಂಕ: 30-06-2020 ರೊಳಗಾಗಿ ಸಲ್ಲಿಸುವಂತೆ ಪತ್ರಿಕಾ ಪ್ರಕಟಣೆ ನೀಡಲಾಗಿತ್ತು. ಆ ದಿನಾಂಕದೊಳಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಿದವರಿಗೆ ರೂ.5,000/- ಗಳ ಪರಿಹಾರವನ್ನು ನೀಡಲಾಗಿರುತ್ತದೆ. ಅದರಂತೆ, ಬೀದರ್ ಜಿಲ್ಲೆ ವ್ಯಾಪ್ತಿಯ ಒಟ್ಟು 71,614 ಫಲಾನುಭವಿಗಳಿಗೆ ತಲಾ ರೂ.5,000/- ಗಳಂತೆ ರೂ.35.80 ಕೋಟಿ ಸಹಾಯಧನವನ್ನು ವಿತರಿಸಲಾಗಿರುತ್ತದೆ.
ಆ)	ಕಟ್ಟಡ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್‌ಶಿಫ್, ಮದುವೆ ಮತ್ತು ಮರಣದ ನೆರವಿನ ಹಣ ಬಿಡುಗಡೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;	ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅದಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. • ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಇರುವ ವಿವಿಧ ಸೌಲಭ್ಯಗಳನ್ನು ತುರ್ತಾಗಿ ಅನುಮೋದಿಸಿ ನಿಗಧಿತ ಅವಧಿಯೊಳಗೆ ಸಹಾಯಧನವನ್ನು ಒದಗಿಸಲು ಸಂಬಂಧಿಸಿದ ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರಿಗೆ ಮತ್ತು ಕಾರ್ಮಿಕ ಅಧಿಕಾರಿಗಳಿಗೆ ಮಂಜೂರಾತಿ ಅಧಿಕಾರವನ್ನು ವಿಕೇಂದ್ರೀಕರಿಸಲಾಗಿದೆ. • ನಿಗಧಿತ ಅವಧಿಯೊಳಗೆ ಸಹಾಯಧನವನ್ನು ಒದಗಿಸಲು ಉದ್ದೇಶಿಸಿ ಕೆನರಾ ಬ್ಯಾಂಕ್ ಹೊಂಬೇಗೌಡನಗರ ಶಾಖೆ ಬೆಂಗಳೂರು, ಇಲ್ಲಿ ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳ ಹೆಸರಲ್ಲಿ ಪ್ರತ್ಯೇಕವಾದ ಬ್ಯಾಂಕ್ ಅಕೌಂಟ್‌ಗಳನ್ನು ತೆರೆದು ಮುಂಗಡವಾಗಿ ಹಣವನ್ನು ಸದರಿ ಖಾತೆಗಳಿಗೆ ವರ್ಗಾಯಿಸಲಾಗುತ್ತಿದೆ.

		• ಸದರಿ ಬ್ಯಾಂಕ್ ನಿಂದ ಪ್ರತಿ ದಿನ ಫಲಾನುಭವಿಗಳಿಗೆ ನೆಫ್ಟ್ / ಆರ್.ಟಿ.ಜಿ.ಎಸ್ ಮೂಲಕ ಸಹಾಯಧನವನ್ನು ವರ್ಗಾಯಿಸಲಾಗುತ್ತಿದೆ. ಈ ರೀತಿ ಖಾತೆಗೆ ಸಹಾಯಧನವು ಜಮೆಯಾದ ಪ್ರಕರಣಗಳಲ್ಲಿ ಯಶಸ್ವಿಗೊರಡ ಫಲಾನುಭವಿಗಳ ವಿವರ ಮತ್ತು ಯಶಸ್ವಿಯಾಗದೇ ಇರುವ ಫಲಾನುಭವಿಗಳ ವಿವರಗಳನ್ನು ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳಿಗೆ ಸಲ್ಲಿಸಲಾಗುತ್ತಿದೆ. • ಸದರಿ ಯಶಸ್ವಿಯಾಗದೇ ಇರುವ ಫಲಾನುಭವಿಗಳ ತಾಂತ್ರಿಕ ದೋಷಗಳನ್ನು ಮತ್ತು ಇತರೆ ಅವಶ್ಯಕತೆ ಇರುವ ದಾಖಲೆಗಳನ್ನು ಸಂಬಂಧಿಸಿದ ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳು ಪುನಃ ಬ್ಯಾಂಕ್‌ಗೆ ಸಲ್ಲಿಸಿ ಫಲಾನುಭವಿಗಳಿಗೆ ನೇರವಾಗಿ ಬ್ಯಾಂಕ್ ಮೂಲಕ ಸಹಾಯಧನ ಒದಗಿಸಲಾಗುತ್ತಿದೆ. • ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳು ಫಲಾನುಭವಿಗಳಿಗೆ ಸಹಾಯಧನ ಮಂಜೂರಾದ ಪಟ್ಟಿಯನ್ನು ಸದರಿ ಬ್ಯಾಂಕಿಗೆ ಕಳುಹಿಸಲಾಗುತ್ತಿದೆ. ಹಾಗೂ ಸದರಿ ಅಧಿಕಾರಿಗಳು ಬ್ಯಾಂಕಿಗೆ ಕಳುಹಿಸಿದ ಸೌಲಭ್ಯದ ವಿವರಗಳ ಬಗ್ಗೆ ಮಂಡಳಿಯಿಂದ ಅಧಿಕಾರಿ / ಸಿಬ್ಬಂದಿಗಳು ಬ್ಯಾಂಕಿಗೆ ಭೇಟಿ ನೀಡಿ ತುರ್ತಾಗಿ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತಿದೆ. ಪ್ರತಿ ತಿಂಗಳ ಅಂತ್ಯಕ್ಕೆ, ಸಂಬಂಧಿಸಿದ ಸಹಾಯಕ ಕಾರ್ಮಿಕ ಆಯುಕ್ತರು, ಕಾರ್ಮಿಕ ಅಧಿಕಾರಿಗಳು ತಮ್ಮ ಕಛೇರಿಯ ಮಾಹಿತಿಯೊಂದಿಗೆ ಸಂಬಂಧಿಸಿದ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ಹಾಗೂ ಮಂಡಳಿಯೊಂದಿಗೆ Reconciliation ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
ಇ)	ಕಟ್ಟಡ ಕಾರ್ಮಿಕರಿಗೆ ಲಭ್ಯವಾಗಿರುವ ಸವಲತ್ತುಗಳಾವುವು? (ಸ್ಪಷ್ಟ ಆದೇಶದ ಪ್ರತಿಗಳೊಂದಿಗೆ ಯೋಜನೆವಾರು ಮಾಹಿತಿ ನೀಡುವುದು)	ಮಂಡಳಿಯ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಇದುವರೆಗೆ ಲಭ್ಯವಾಗಿರುವ ಸವಲತ್ತುಗಳ ವಿವರವನ್ನು <u>ಅನುಬಂಧದಲ್ಲಿ</u> ನೀಡಿದೆ.

ಕಾಇ 96 ಎಲ್‌ಇಟಿ 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

ಅನುಬಂಧ

(ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1176)

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿವತಿಯಿಂದ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) :** ರೂ.30,000/- ವರೆಗೆ
5. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ):** ರೂ.2,00,000/- ದವರೆಗೆ ಮುಂಗಡ ಸೌಲಭ್ಯ
6. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
7. **ಶಿಶು ಪಾಲನಾ ಸೌಲಭ್ಯ:**
8. **ಅಂತ್ಯಕ್ರಿಯೆ ವೆಚ್ಚ :** ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
9. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

ಕ್ರಸಂ	ತರಗತಿ (ಉತ್ತೀರ್ಣಕ್ಕೆ)	ವಾರ್ಷಿಕ ಸಹಾಯ ಧನ	
		ಗಂಡು	ಹೆಣ್ಣು
I.	ನರ್ಸರಿ	3,000	4,000
II.	1 ರಿಂದ 4ನೇ ತರಗತಿ	3,000	4,000
III.	5 ರಿಂದ 8ನೇ ತರಗತಿ	5,000	6,000
IV.	9 ಹಾಗೂ 10ನೇ ತರಗತಿ	10,000	11,000
V.	ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ	10,000	14,000
VI.	ಐಟಿಐ	12,000	15,000
VII.	ಪದವಿ ಪ್ರತಿ ವರ್ಷಕ್ಕೆ	15,000	20,000
VIII.	ಸ್ನಾತಕೋತ್ತರ ಪದವಿ ಸೇರ್ಪಡೆಗೆ	20,000	20,000
	ಮತ್ತು ಪ್ರತಿ ವರ್ಷಕ್ಕೆ	20,000	25,000
IX.	ಇಂಜಿನಿಯರಿಂಗ್ ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ	25,000	25,000
	ಮತ್ತು ಪ್ರತಿ ವರ್ಷಕ್ಕೆ	25,000	30,000
X.	ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ	30,000	30,000
	ಮತ್ತು ಪ್ರತಿ ವರ್ಷಕ್ಕೆ	40,000	50,000
XI.	ಡಿಪ್ಲೋಮಾ	15,000	20,000
XII.	ಎಂ.ಟೆಕ್ / ಎಂ.ಇ	30,000	35,000
XIII.	ಎಂ.ಡಿ (ವೈದ್ಯಕೀಯ)	45,000	55,000
XIV.	ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ	25,000	30,000

10. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ ರೂ.300/- ರಿಂದ ರೂ.10,000/-ವರೆಗೆ

11. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-,** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
13. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
14. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್
15. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
16. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.